## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1265**

ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 24-12-2021

ಉತ್ತರಿಸುವವರು : ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಜ್ಯದಲ್ಲಿ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳನ್ನು ತೆರೆಯಲು ಇರುವ ನಿಯಮಗಳೇನು; ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಸದರಿ ಕೇಂದ್ರಗಳನ್ನು ಸ್ಥಾಪಿಸಲು ದೊರೆಯುತ್ತಿರುವ ನೆರವು, ಸಾಲ, ಸಹಾಯಧನ, ಪ್ರೋತ್ಸಾಹಧನ ಹಾಗೂ ಇತರೆ ಸೌಲಭ್ಯಗಳೇನು; (ಆದೇಶಗಳ ಪ್ರತಿ ನೀಡುವುದು) | ರಾಜ್ಯದಲ್ಲಿ ಖಾಸಗಿ ರೇಷ್ಮೆ ಚಾಕಿ ಸಾಕಾಣಿಕೆ ಕೇಂದ್ರ ತೆರೆಯಲು<br>1. ಫಲಾನುಭವಿಯು ಕೇಂದ್ರ ರೇಷ್ಮೆ ಮಂಡಳಿಯಲ್ಲಿ ನೊಂದಣಿ ಮಾಡಿಕೊಳ್ಳಬೇಕು.<br>2. ದ್ವಿತಳಿ ಚಾಕಿ ಸಾಕಾಣಿಕಾ ಕೇಂದ್ರವನ್ನು ತೆರೆಯಲು ಇಚ್ಛಿಸುವ ಫಲಾನುಭವಿ ಮಾನ್ಯತೆ ಪಡೆದ ರಾಜ್ಯ/ಕೇಂದ್ರ ರೇಷ್ಮೆ ತರಬೇತಿ ಸಂಸ್ಥೆಯಲ್ಲಿ 3 ತಿಂಗಳು ಅವಧಿಗೆ ``ಚಾಕಿ ಸಾಕಾಣಿಕೆ" ಬಗ್ಗೆ ತರಬೇತಿಯನ್ನು ಪಡೆಯಬೇಕು.<br>3. ಫಲಾನುಭವಿಗೆ ಕನಿಷ್ಠ 2 ಎಕರೆ ಸ್ವಂತ ಅಥವಾ ಗುತ್ತಿಗೆ ಆಧಾರದ ಮೇಲೆ ಪಡೆದ ನೀರಾವರಿವುಳ್ಳ ಹಿಪ್ಪುನೇರಳೆ ಚಾಕಿ ತೋಟವಿದ್ದು ಹನಿ ನೀರಾವರಿ ಅಳವಡಿಸಿರಬೇಕು. ಸಾವಯವ ಗೊಬ್ಬರಗಳನ್ನು ಹೆಚ್ಚಾಗಿ ಬಳಸಬೇಕು.<br>4. 5000 ರೋಗ ರಹಿತ ಮೊಟ್ಟೆಗಳ ಚಾಕಿ ಕಟ್ಟುವುದಕ್ಕೆ (ಉ42 X ಅ30 X ಎ16) 1260 ಚದರಡಿ ಚಾಕಿ ಸಾಕಾಣಿಕಾ ಕಟ್ಟಡವನ್ನು ಚಾಕಿ ತೋಟದಲ್ಲಿಯೇ ನಿರ್ಮಿಸಿರಬೇಕು.<br>5. ವಾರ್ಷಿಕ 1.50 ರಿಂದ 1.60 ಲಕ್ಷ ದ್ವಿತಳಿ ಮೊಟ್ಟೆ ಚಾಕಿ ಕಟ್ಟುವ ಸಾಮರ್ಥ್ಯತೆಯಿರಬೇಕು. ಪ್ರತಿ ತಂಡಕ್ಕೆ 5 ಸಾವಿರ ಮೊಟ್ಟೆಗಳಂತೆ ವರ್ಷಕ್ಕೆ 32 ತಂಡಗಳಲ್ಲಿ ಚಾಕಿ ಮಾಡುವ ಸಾಮರ್ಥ್ಯ ಇರಬೇಕು.<br>6. ಚಾಕಿ ಸಾಕಾಣಿಕೆಗೆ ಅಗತ್ಯವಾದ ಎಲ್ಲಾ ಸಲಕರಣೆಗಳನ್ನು ಖರೀದಿಸಬೇಕು.<br><br>ಕೇಂದ್ರ ರೇಷ್ಮೆ ಮಂಡಳಿಯ ಸಹಯೋಗದೊಂದಿಗೆ ರೇಷ್ಮೆ ಇಲಾಖೆಯು ಕೇಂದ್ರ ಪುರಸ್ಕೃತ "ಸಿಲ್ಕ್ ಸಮಗ್ರ" ಯೋಜನೆಯಡಿ ಹೊಸದಾಗಿ ಸ್ಥಾಪಿಸಿರುವ ನೋಂದಾಯಿತ ಖಾಸಗಿ ದ್ವಿತಳಿ ಚಾಕಿ ಸಾಕಾಣಿಕಾ ಕೇಂದ್ರಗಳಿಗೆ ಹಿಪ್ಪುನೇರಳೆ ತೋಟ ಸ್ಥಾಪನೆ/ನಿರ್ವಹಣೆ, ಚಾಕಿ ಸಾಕಾಣಿಕಾ ಕಟ್ಟಡ ನಿರ್ಮಾಣ ಮತ್ತು ಚಾಕಿ ಸಾಕಾಣಿಕಾ ಸಲಕರಣೆ ಖರೀದಿಗೆ (ಮೂರು ಘಟಕಗಳು ಸೇರಿ) ಸಹಾಯಧನ ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. |